# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎ. ರಾಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಇವರು ಕುಂದಾಪುರದಲ್ಲಿ ಕೃಷಿ ಪರಿಕರಗಳು ಸರಬರಾಜಾಗದಿರುವ ಸಂಸ್ಥೆಗೆ ಸರ್ಕಾರಿ ಸಹಾಯ ಧನವನ್ನು ಪಾವತಿಸಿರುವ ಅವ್ಯವಹಾರದ ಸಂಬಂಧ ಇಲಾಖಾ ವಿಚಾರಣೆಗೆ ವಿಚಾರಣಾಧಿಕಾರಿಗಳ ನೇಮಕ ಕುರಿತು.

**ಓದಲಾಗಿದೆ:**

1. ಕೃಷಿ ಆಯುಕ್ತರ ಪತ್ರ ಸಂ: ಸಿಬ್ಬಂದಿ-1/ವಿಚಾರಣೆ-5/4/2009-2010. ದಿನಾಂಕ : 30-06-2011.
2. ಕಾರಣ ಕೇಳುವ ಪತ್ರ ಸಂಖ್ಯೆ: ಕೃಇ 39 ಕೃಪವಿ 2011. ದಿನಾಂಕ : 24-10-2011.
3. ಶ್ರೀ ಎ. ರಾಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಕುಂದಾಪುರ ಇವರ ಲಿಖಿತ ಹೇಳಿಕೆ ದಿನಾಂಕ: 15-11-2011.

*********

**ಪ್ರಸ್ತಾವನೆ:**

ಮೇಲೆ ಕ್ರ. ಸಂ. (1) ರಲ್ಲಿ ಓದಲಾದ ಪತ್ರದಲ್ಲಿ ಕೃಷಿ ಆಯುಕ್ತರು, ಬೆಂಗಳೂರು ಇವರು ಶ್ರೀ ಎ. ರಾಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಇವರು ಕುಂದಾಪುರದಲ್ಲಿ ಕೃಷಿ ಪರಿಕರಗಳು ಸರಬರಾಜಾಗದಿರುವ ಸಂಸ್ಥೆಗೆ ಸರ್ಕಾರಿ ಸಹಾಯಧನವನ್ನು ಪಾವತಿಸಿರುವ ಅವ್ಯವಹಾರದ ಸಂಬಂಧ ಸದರಿ ಅಧಿಕಾರಿಯವರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಕೃಷಿ ಆಯುಕ್ತರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಅದರಂತೆ ಶ್ರೀ ಎ. ರಾಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಕುಂದಾಪುರ ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ದೋಷಾರೋಪಣೆ ಪಟ್ಟಿಯೊಡನೆ ಕ್ರಮ ಸಂ. (2) ರಲ್ಲಿ ಓದಲಾದ ಪತ್ರದಲ್ಲಿ ಜಾರಿ ಮಾಡಲಾಗಿತ್ತು. ಸದರಿ ಅಧಿಕಾರಿಗಳು ಕ್ರ. ಸಂ: (3) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರಕ್ಕೆ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ತಮ್ಮ ಮೇಲಿನ ಆರೋಪಗಳನ್ನು ಅಲ್ಲಗಳೆದು ತಮ್ಮನ್ನು ದೋಷಮುಕ್ತರನ್ನಾಗಿ ಕೋರಿರುತ್ತಾರೆ. ಸದರಿ ಅಧಿಕಾರಿಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿ, ಅವರ ಹೇಳಿಕೆಯಲ್ಲಿ ಪರಿಶೀಲಿಸುವಂತಹ ಅಂಶಗಳು ಇಲ್ಲವಾದ್ದರಿಂದ ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿ, ಶ್ರೀ ಎಂ.ಜಿ. ಹಿರೇಮಠ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿ ಮತ್ತು ಉಡುಪಿ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಅಧೀಕ್ಷಕರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 39 ಕೃಪವಿ 2011.**
**ಬೆಂಗಳೂರು. ದಿನಾಂಕ: 10/08/2012.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಎ. ರಾಜಣ್ಣ, ಸಹಾಯಕ ಕೃಷಿ ನಿರ್ದೇಶಕರು, ಇವರು ಈ ಹಿಂದೆ ಕುಂದಾಪುರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾಗ 2005-06 ಮತ್ತು

--2--

2006-07ನೇ ಸಾಲಿನಲ್ಲಿ ಕೃಷಿ ಪರಿಕರಗಳು ಸರಬರಾಜು ಮಾಡದಿದ್ದ ಸಂಸ್ಥೆಗಳಿಗೂ ಸಹ ಹಣ ಪಾವತಿಸಿ ರೂ. 2,12,393/-ಗಳ ಸರ್ಕಾರದ ಹಣ ನಷ್ಟವಾಗಲು ಕಾರಣರಾಗಿರುತ್ತಾರೆಂಬ ಆಪಾದನೆಗೆ ಸಂಬಂಧಿಸಿದಂತೆ, ಅವರ ಮೇಲೆ ಇಲಾಖಾವಿಚಾರಣೆ ನಡೆಸಲು ಸರ್ಕಾರವು ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 2ರಲ್ಲಿ ಪ್ರದತ್ತವಾಗಿರುವ ಅಧಿಕಾರ ಚಲಾಯಿಸಿ ಶ್ರೀ ಎಂ.ಜಿ. ಹಿರೇಮಠ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಹಾಗೂ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 5(ಸಿ)ಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶಿಸ್ತು ಪ್ರಾಧಿಕಾರಿಯ ಪರವಾಗಿ ವಿಷಯ ಮಂಡಿಸಲು ಅಧೀಕ್ಷಕರು, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಉಡುಪಿ, ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
4. ಜಂಟಿ ಕೃಷಿ ನಿರ್ದೇಶಕರು, ಉಡುಪಿ.
5. ಶ್ರೀ ಎಂ.ಜಿ. ಹಿರೇಮಠ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ. 746, 15ನೇ ಮೈನ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಜಿ.ಕೆ.ವಿ.ಕೆ. ಪೋಸ್ಟ್ ಬೆಂಗಳೂರು-65.
6. ಅಧೀಕ್ಷಕರು, ಜಂಟಿ ಕೃಷಿ ನಿರ್ದೇಶಕರ ಕಛೇರಿ, ಉಡುಪಿ.
7. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
9. ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು.
10. ಸಂಬಂಧಿಸಿದ ಅಧಿಕಾರಿಗೆ (ಆಯುಕ್ತರು, ಕೃಷಿ ಇಲಾಖೆ ಇವರ ಮುಖಾಂತರ).
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.